ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲು 2ನೇ ಎದುರುದಾರರ ಪರ ವಕೀಲರಿಂದಃ-

ಮೃತ ನನ್ನ ತಮ್ಮನವರು ಬಾರಿನ ಹತ್ತಿರ ನಿಲ್ಲಿಸಿದ್ದ ಬುಲೆಟ್ ಬೈಕ್ ಅನ್ನು ಮಾಲೀಕರ ಅನುಮತಿ ಪಡೆಯದೇ ಬೈಕ್ ತೆಗೆದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಮಾಲೀಕರ ಅನುಮತಿ ಪಡೆದುಕೊಂಡೇ ಹೋಗಿರುತ್ತಾರೆ ಎಂದು ನುಡಿಯುತ್ತಾರೆ, 2ನೇ ಎದುರದಾರರು ಖುದ್ದು ಬೈಕ್ ಕೀ ಕೊಟ್ಟಿಲ್ಲದೇ ಇದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿ. ನಾವು ಮಾಲೀಕರ ವಿರುದ್ಧ ಯಾವುದೇ ಪರಿಹಾರ ಕೋರಿಲ್ಲ ಎಂದರೆ ಸರಿಯಲ್ಲ, ಮಾಲೀಕರ ಅನುಮತಿ ಪಡೆಯದೇ ಬುಲೆಟ್ ತೆಗೆದುಕೊಂಡು ಹೋಗಿರುವುದರಿಂದ ಎಲ್ಲಾ ಆಗುಹೋಗುಗಳಿಗೆ ಅವರೇ ಬಾದ್ಯಸ್ಥರು ಎಂದರೆ ಸರಿಯಲ್ಲ. 2ನೇ ಎದುರುದಾರರ ವಾಹನಕ್ಕೆ ವಿಮೆ ಚಾಲ್ತಿಯಲ್ಲಿ ಇತ್ತು ಎಂದರೆ ಸರಿ. 1ನೇ ಎದುರುದಾರರ ತಪ್ಪಿನಿಂದ ಅಪಘಾತವಾಗಿರುವ ಕಾರಣ 2ನೇ ಎದರುದಾರರು ಯಾವುದೇ ಪರಿಹಾರ ಕೊಡಲು ಬಾದ್ಯಸ್ಥರಲ್ಲ ಎಂದರೆ ಸರಿಯಲ್ಲ. ನನ್ನ ತಮ್ಮ ಆ ದಿನ ಡಿ.ಎಲ್ ಇಟ್ಟುಕೊಂಡು ಹೆಲ್ಮೆಟ್ ಧರಿಸಿ ವಾಹನ ಚಲಾಯಿಸುತ್ತಿದ್ದ ಬಗ್ಗೆ ನನಗೆ ಮಾಹಿತಿ ಇದೆ.

ಮರು ವಿಚಾರಣೆಃ- ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
1ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.